ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ,
ಚಾವಿಸನಿನಿ, ಮೈಸೂರು-570017
Telephone No: 0821-234338

CHAMUNDESHWARI ELECTRICITY SUPPLY CORPORATION LIMITED
(A Government of Karnataka Undertaking)
Corporate Office,
CESC, Mysuru-570017
Web Site: www.cescmysore.org.
E-mail ID:gmhrd@cescmysore.org

Company Identity Number[CIN]:- U40109KA2004SGC035177

ಕ್ರಮಾಂಕ : ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/MF-26/2021-22/Cys-428 ದಿನಾಂಕ: 15 JUN 2021

# ಸುತ್ತೋಲೆ

ವಿಷಯ: ಸ್ಪಷ್ಟೀಕರಣ ಮತ್ತು ಅನುಮೋದನೆಗೆ ಸಂಬಂಧಿಸಿದಂತೆ ಚಾವಿಸನಿನಿ ನಿಗಮ ಕಾರ್ಯಾಲಯಕ್ಕೆ ನೇರವಾಗಿ ಪತ್ರ ವ್ಯವಹಾರ ಮಾಡುತ್ತಿರುವ ಬಗ್ಗೆ.

ಉಲ್ಲೇಖ:- ನಿರ್ದೇಶಕರು(ಆ ಮತ್ತು ಮಾಸಂ), ಕವಿಪ್ರನಿನಿರವರ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ16/819/2019-20 ದಿನಾಂಕ: 28.11.2019.

*****

ಚಾವಿಸನಿನಿಯ ವೃತ್ತ ಕಛೇರಿ, ವಿಭಾಗ ಕಛೇರಿ, ಮತ್ತು ಉಪವಿಭಾಗ ಕಛೇರಿಗಳಿಂದ ಹಲವಾರು ವಿಷಯಗಳಿಗೆ ಸಂಬಂಧಿಸಿದಂತೆ ಸ್ಪಷ್ಟೀಕರಣ ಮತ್ತು ಅನುಮೋದನೆ ಕೋರಿ ಚಾವಿಸನಿನಿ ನಿಗಮ ಕಾರ್ಯಾಲಯಕ್ಕೆ ನೇರವಾಗಿ ಪತ್ರ ವ್ಯವಹಾರ ನಡೆಸುತ್ತಿರುವುದು ನಿಗಮದ ಗಮನಕ್ಕೆ ಬಂದಿರುತ್ತದೆ. ಈ ರೀತಿಯ ಪತ್ರ ವ್ಯವಹಾರಗಳಲ್ಲಿ ಒಂದು ಸಾಮಾನ್ಯ ವಿಷಯಕ್ಕೆ ಸಂಬಂಧಿಸಿದಂತೆ ವೃತ್ತ/ವಿಭಾಗ/ಉಪವಿಭಾಗಗಳಿಗೆ ಈಗಾಗಲೇ ಸ್ಪಷ್ಟೀಕರಣವನ್ನು ನೀಡಿದ್ದರೂ ಸಹ, ಮತ್ತೊಮ್ಮೆ ಅದೇ ರೀತಿಯ ಬೇರೊಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಪಷ್ಟೀಕರಣವನ್ನು ಕೋರಲಾಗುತ್ತಿದೆ ಹಾಗೂ ಈಗಾಗಲೇ ನಿಗಮದ ಆದೇಶಗಳು, ಸುತ್ತೋಲೆಗಳು ಮತ್ತು ನಿಗಮದ ಕೈಪಿಡಿಗಳಲ್ಲಿ ಸ್ಪಷ್ಟವಾದ ಸೂಚನೆಗಳಿದ್ದಾಗ್ಯೂ, ಸ್ಪಷ್ಟೀಕರಣಗಳನ್ನು ಕೋರಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಚಾವಿಸನಿನಿ ನಿಗಮ ಕಾರ್ಯಾಲಯಕ್ಕೆ ಈ ರೀತಿಯ ಪತ್ರ ವ್ಯವಹಾರಗಳು ಹೆಚ್ಚಾಗುತ್ತಿರುವುದರಿಂದ ನಿಗಮದ ದೈನಂದಿನ ಕೆಲಸ ಕಾರ್ಯಗಳಿಗೆ ಅನಾವಶ್ಯಕ ವಿಳಂಬವಾಗುತ್ತಿದೆ.

ಸ್ಪಷ್ಟೀಕರಣ ಕೋರುವ ವೃತ್ತ/ವಿಭಾಗ/ಉಪವಿಭಾಗಗಳ ಕಛೇರಿಗಳ ಮುಖ್ಯಸ್ಥರು ನಿಗಮದ ಆದೇಶಗಳು/ಸುತ್ತೋಲೆಗಳು/ಸ್ಪಷ್ಟೀಕರಣಗಳು ಮತ್ತು ನಿಗಮದ ಕೈಪಿಡಿಗಳನ್ನು ಸರಿಯಾಗಿ ಅರ್ಥೈಸಿಕೊಂಡು ನೌಕರರ ಮನವಿಯ ಬಗ್ಗೆ ಶೀಘ್ರವಾಗಿ ಕ್ರಮ ತೆಗೆದುಕೊಳ್ಳದೆ, ಸ್ಪಷ್ಟೀಕರಣಕ್ಕಾಗಿ ನಿಗಮ ಕಾರ್ಯಾಲಯಕ್ಕೆ ನೇರವಾಗಿ ಪತ್ರ ವ್ಯವಹಾರ ಮಾಡಿ ಕಾಲವಿಳಂಬ ಮಾಡುತ್ತಿರುವುದು ಹಾಗೂ ನೌಕರರ ಸಮಸ್ಯೆಗಳನ್ನು ಇತ್ಯರ್ಥಪಡಿಸುವಲ್ಲಿ ಬಹಳ ವಿಳಂಬ ಮಾಡುತ್ತಿರುವುದನ್ನು ನಿಗಮವು ಗಂಭೀರವಾಗಿ ಪರಿಗಣಿಸಿದೆ.

ಆದಾಗ್ಯೂ ವೃತ್ತ/ವಿಭಾಗ/ಉಪವಿಭಾಗಗಳ ಕಛೇರಿಗಳ ಅಧಿಕಾರಿಗಳು ಸಂಬಂಧಪಟ್ಟ ಮುಖ್ಯ ಇಂಜಿನಿಯರ್(ವಿ) ರವರೊಡನೆ ಪತ್ರ ವ್ಯವಹಾರ ನಡೆಸಿ ಅನುಮೋದನೆ/ಸ್ಪಷ್ಟೀಕರಣವನ್ನು ಪಡೆಯಬಹುದಾಗಿದೆ.

ಮುಖ್ಯ ಇಂಜಿನಿಯರ್(ವಿ)ರವರುಗಳು ವೃತ್ತ/ವಿಭಾಗ/ಉಪವಿಭಾಗಗಳಿಂದ ಬರುವ ಪತ್ರಗಳಿಗೆ ನಿಯಮಗಳನು ಸಾರ ಸೂಕ್ತ ಸ್ಪಷ್ಟೀಕರಣಗಳನ್ನು ನೀಡುವಂತೆಯೂ ಮತ್ತು ಒಂದು ವೇಳೆ ನಿಗಮದ ನಿಯಮಗಳನ್ನು ಅರ್ಥೈಸಿಕೊಳ್ಳುವಲ್ಲಿ ಯಾವುದೇ ಗೊಂದಲ ಅಥವಾ ಸಂದೇಹ ಉಂಟಾದಲ್ಲಿ ಅಥವಾ ನಿಗಮದ ಅನುಮೋದನೆಯ ಅವಶ್ಯಕತೆ ಇರುವ ಪ್ರಕರಣಗಳಲ್ಲಿ ಮಾತ್ರ ನಿಗಮ ಕಾರ್ಯಾಲಯದೊಡನೆ ಪತ್ರ ವ್ಯವಹಾರ ನಡೆಸಿ ಅನುಮೋದನೆ/ಸ್ಪಷ್ಟೀಕರಣವನ್ನು ಪಡೆಯುವಂತೆ ಈ ಮೂಲಕ ಸೂಚಿಸಲಾಗಿದೆ.

ಇನ್ನು ಮುಂದೆ ಉಪವಿಭಾಗ, ವಿಭಾಗ ಮತ್ತು ವೃತ್ತ ಮಟ್ಟದ ಕಛೇರಿಗಳಿಂದ ನೇರವಾಗಿ ನಿಗಮ ಕಾರ್ಯಾಲಯಕ್ಕೆ ಪತ್ರ ವ್ಯವಹಾರ ಮಾಡಿದಲ್ಲಿ, ಸದರಿ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗುವುದು ಹಾಗೂ ಅಂತಹ ಪತ್ರಗಳಿಗೆ ಯಾವುದೇ ಮಹಿತಿ/ಸ್ಪಷ್ಟೀಕರಣಗಳನ್ನು ನಿಗಮದಿಂದ ನೀಡಲಾಗುವುದಿಲ್ಲ. ಆದಾಗ್ಯೂ, ಈ ಸೂಚನೆಯನ್ನು ಮೀರಿ ಪತ್ರ ವ್ಯವಹಾರ ನಡೆಸುವ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಈ ಸುತ್ತೋಲೆಯ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತಿಳಿಸಲಾಗಿದೆ.

ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರಿಂದ
ಅನುಮೋದಿಸಲ್ಪಟ್ಟಿರುತ್ತದೆ.

Rajesh

ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ)
ಚಾವಿಸನಿನಿ., ಮೈಸೂರು.

D/Law/suthole/2020-21

ಪ್ರತಿಗಳು:

1. ಮುಖ್ಯ ಇಂಜಿನಿಯರ್(ವಿ), ಮೈಸೂರು ವಲಯ, ಚಾವಿಸನಿನಿ, ಮೈಸೂರು/ಹಾಸನ ಇವರ ಅವಗಾಹನೆಗಾಗಿ.
2. ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ). ಚಾವಿಸನಿನಿ, ಮೈಸೂರು ಇವರ ಮಾಹಿತಿಗಾಗಿ
3. ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿ, ಮೈಸೂರು/ ಚಾಮರಾಜನಗರ-ಕೊಡಗು/ ಹಾಸನ/ಮಂಡ್ಯ ಇವರ ಮಾಹಿತಿಗಾಗಿ.
4. ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿ, ಮೈಸೂರು/ ಚಾಮರಾಜನಗರ-ಕೊಡಗು/ ಹಾಸನ/ಮಂಡ್ಯ ರವರ ಮಾಹಿತಿಗಾಗಿ.
5. ಕಂಪನಿ ಕಾರ್ಯದರ್ಶಿ, ನಿಗಮ ಕಛೇರಿ, ಚಾವಿಸನಿನಿ, ಮೈಸೂರು ಇವರ ಮಾಹಿತಿಗಾಗಿ
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ
7. ಎಲ್ಲಾ ಲೆಕ್ಕಾಧಿಕಾರಿ/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನೆ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ
8. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ಮುಖ್ಯ ಆರ್ಥಿಕ ಅಧಿಕಾರಿರವರುಗಳ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತ, ಸುತ್ತೋಲೆಯ ಮಾಹಿತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ ಮುಖ್ಯ ಆರ್ಥಿಕ ಅಧಿಕಾರಿಯವರ ಗಮನಕ್ಕೆ ತರುವಂತೆ ಕೋರಿದೆ.
9. ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಎಂ.ಐ.ಎಸ್. ಶಾಖೆ, ನಿಗಮ ಕಛೇರಿ, ನಿಗಮದ ವೆಬ್‌ಸೆಟ್ ನಲ್ಲಿ ಪ್ರಕಟಿಸಲು.
10. ವ್ಯ-1/ಪ್ರ.ಕ.